**ಕರ್ನಾಟಕ ಸರ್ಕಾರದ ನಡವಳಿಗಳು**

ವಿಷಯ:- ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯರ ಮೇಲೆ ನಡೆಯುವ ಲೈಂಗಿಕ ಕಿರುಕುಳ ತಡೆಯಲು ದೂರು ನಿವಾರಣಾ ಸಮಿತಿ ರಚಿಸುವ ಬಗ್ಗೆ

ಓದಲಾಗಿದೆ:- ಭಾರತ ಸರ್ಕಾರದ ಕಾನೂನು ಮತ್ತು ನ್ಯಾಯ ಮಂತ್ರಾಲಯಂದ ಹೊರಡಿಸಿರುವ ದಿನಾಂಕ 23-04-2013ರ ಅಧಿನಿಯಮ.

ಪ್ರಸ್ತಾವನೆ:-

ಸರ್ವೋಚ್ಛ ನ್ಯಾಯಾಲಯದ ತೀರ್ಪಿನಂತೆ ಕೆಲಸ ಮಾಡುವ ಸ್ಥಳಗಳಲ್ಲಿ ಮಹಿಳೆಯ ಮೇಲೆ ನಡೆಯುವ ಲೈಂಗಿಕ ಕಿರುಕುಳಗಳನ್ನು ತಡೆಯಲು ಇಲಾಖಾ /ನಿಗಮ/ಮಂಡಳಿಗಳ ಹಂತದಲ್ಲಿ ದೂರು ನಿರ್ವಹಣಾ ಸಮಿತಿಗಳನ್ನು ರಚಿಸುವ ಬಗ್ಗೆ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಹೊರಡಿಸಿರುವ ಆದೇಶ ಮತ್ತು ಭಾರತ ಸರ್ಕಾರದ ಕಾನೂನು ಮತ್ತು ನ್ಯಾಯ ಮಂತ್ರಾಲಯ ಹೊರಡಿಸಿರುವ "The Sexual Harrassment of Women at work Place (Prevention, Prohibition and Redressal ) Act 2013"ಅಧಿನಿಯಮದಡಿ ವಸತಿ ಇಲಾಖೆಯ ಅಧೀನದಲ್ಲಿ ಬರುವ ನಿಗಮ/ಮಂಡಳಿಗಳಿಗೆ ಅನ್ವಯಿಸುವಂತೆ ಮಹಿಳಾ ದೂರು ನಿರ್ವಹಣಾ ಸಮಿತಿಯನ್ನು ರಚಿಸಲು ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ವಇ 88 ಸ್ವೀಮರ 2014,**
**ಬೆಂಗಳೂರು, ದಿನಾಂಕ 27-05-2014**

ಭಾರತ ಸರ್ಕಾರದ ಕಾನೂನು ಮತ್ತು ನ್ಯಾಯ ಮಂತ್ರಾಲಯ ಹೊರಡಿಸಿರುವ "The Sexual Harrassment of Women at work Place (Prevention, Prohibition and Redressal ) Act 2013" ಆಧಿನಿಯಮ ಅನ್ವಯ ವಸತಿ ಇಲಾಖೆಯ ಅಧೀನದಲ್ಲಿ ಬರುವ ಕರ್ನಾಟಕ ಗೃಹ ಮಂಡಳಿ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ ಮತ್ತು ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮಗಳಿಗೆ ಒಟ್ಟಾಗಿ ಅನ್ವಯವಾಗುವಂತೆ ದೂರು ನಿವಾರಣಾ ಸಮಿತಿಯನ್ನು ರಚಿಸಿ, ಸದರಿ ಸಮಿತಿಗೆ ಈ ಕೆಳಕಂಡ ಅಧಿಕಾರಿಗಳು ಮತ್ತು ಸರ್ಕಾರೇತರ ಸಂಸ್ಥೆಯ ಒಬ್ಬ ಪ್ರತಿನಿಧಿ ಸದಸ್ಯರನ್ನು ನೇಮಿಸಿ ಆದೇಶ ಹೊರಡಿಸಲಾಗಿದೆ.

| | ಹೆಸರು | ಪದನಾಮ |
|---|---|---|
| 1 | ಶ್ರೀಮತಿ ಎಸ್. ರೂಪಶ್ರೀ, ವಿಶೇಷ ಭೂ ಸ್ವಾಧೀನಾಧಿಕಾರಿ, ಕರ್ನಾಟಕ ಗೃಹ ಮಂಡಳಿ | ಅಧ್ಯಕ್ಷರು |
| 2 | ಶ್ರೀ ಜಿ. ಪ್ರಭು, ಪ್ರಧಾನ ವ್ಯವಸ್ಥಾಪಕರು (ಕಾರ್ಯಕ್ರಮ ಅನುಷ್ಠಾನ), ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ನಿಯಮಿತ | ಸದ್ಯಸರು |
| 3 | ಶ್ರೀ ಎಸ್. ಮುನಿರಾಜು, ಕಂದಾಯಾಧಿಕಾರಿ, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ | ಸದಸ್ಯರು |
| 4 | ಶ್ರೀಮತಿ ಎನ್.ಬಿ. ಲೇಪಾಕ್ಷಿ, ಸಹಾಯಕ ಕಂದಾಯ ಅಧಿಕಾರಿ, ಕರ್ನಾಟಕ ಗೃಹ ಮಂಡಳಿ | ಸದಸ್ಯರು |
| 5 | ಶ್ರೀಮತಿ ಸಂತೋಷ್ ವಾಸ್, ಜನೋದಯ, #3, 9ನೇ ಕ್ರಾಸ್, 5ನೇ ಮೈನ್, ಜಯಮಹಲ್ ಎಕ್ಸ್‌ಟೆನ್ಷನ್, ಬೆಂಗಳೂರು-560 046. | ಸದಸ್ಯರು (ಸರ್ಕಾರೇತರ) |

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು
ಅವರ ಹೆಸರಿನಲ್ಲಿ

27/05/2014

(ಜಿ. ವೆಂಕಟೇಶನ್)
ಸರ್ಕಾರದ ಅಧೀನ ಕಾರ್ಯದರ್ಶಿ,
ವಸತಿ ಇಲಾಖೆ (ವಸತಿ-1)

ಗೆ:

1. ಆಯುಕ್ತರು, ಕರ್ನಾಟಕ ಗೃಹ ಮಂಡಳಿ, ಬೆಂಗಳೂರು.
2. ಆಯುಕ್ತರು, ಕರ್ನಾಟಕ ಕೊಳಗೇರಿ ಅಭಿವೃದ್ಧಿ ಮಂಡಳಿ, ಬೆಂಗಳೂರು.
3. ವ್ಯವಸ್ಥಾಪಕ ನಿರ್ದೇಶಕರು, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ, ಬೆಂಗಳೂರು.

ಪ್ರತಿ:-

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಸತಿ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
2. ಸಂಬಂಧಪಟ್ಟ ಸದಸ್ಯರು.
3. ರಕ್ಷಾ ಕಡತ : ಹೆಚ್ಚುವರಿ ಪ್ರತಿಗಳು.